RNU AIR DHARWAD

**NOVEMBER 19,2024**
**ALL INDIA RADIO- DHARWAD**
**PRADESH SAMACHARA (KANNADA) 12PM**

<><><>

ಆಕಾಶವಾಣಿ

ಪ್ರದೇಶ ಸಮಾಚಾರ

ಓದಿದವವರು: ವಿವೇಕಾದಿತ್ಯ ಕನಿಯಾಲ

<><><>

'ಕುಲ, ಕುಲವೆಂದು ಹೊಡೆದಾಡದಿರಿ, ನಿಮ್ಮ ಕುಲದ ನೆಲೆಯನೇನಾದರೂ ಬಲ್ಲಿರಾ?!' ಎಂದ, ಸಂತ ಶ್ರೇಷ್ಠ ಕನಕದಾಸರು, ಸಮಾಜದ ಜಾತಿ ತಾರತಮ್ಯ ಹೋಗಲಾಡಿಸಲು, ತಮ್ಮ ಕೀರ್ತನೆಗಳ ಮೂಲಕ, ಜನ ಜಾಗ್ರತಿ ಮೂಡಿಸಿದರು ಎಂದು, ಕೇಂದ್ರ ನವ ಹಾಗೂ ನವೀಕರಿಸಬಹುದಾದ ಇಂಧನಗಳ ಖಾತೆ ಸಚಿವ, ಪ್ರಲ್ಹಾದ ಜೋಶಿ ನುಡಿದರು. ಧಾರವಾಡದ, ಆಲೂರು ವೆಂಕಟರಾವ ಸಾಂಸ್ಕೃತಿಕ ಭವನದಲ್ಲಿ, ಜಿಲ್ಲಾಡಳಿತ ಆಯೋಜಿಸಿದ್ದ ಕನಕದಾಸರ ಜಯಂತ್ಯುತ್ಸವ ಕಾರ್ಯಕ್ರಮದಲ್ಲಿ ಪಾಲ್ಗೊಂಡು, ಅವರು ಮಾತನಾಡಿದರು. ಕನಕದಾಸರು ತಮ್ಮ ತತ್ವಜ್ಞಾನ, ಚಿಂತನೆಗಳು ಮತ್ತು ಕೀರ್ತನೆಗಳ ಮೂಲಕ, ಸಮಾಜದಲ್ಲಿ ಸಮಾನತೆ, ಸಾಮಾಜಿಕ ಸಾಮರಸ್ಯ ಮತ್ತು ಸಮತೆಯನ್ನು ಸ್ಥಾಪಿಸಲು ಶ್ರಮಿಸಿದ, ದೈವ ಪುರುಷ ಎಂದು, ಸಚಿವ ಜೋಶಿ ಬಣ್ಣಿಸಿದರು.

<><><>

ರಾಜ್ಯದಲ್ಲಿ ವಿಪಕ್ಷ ಸ್ಥಾನದಲ್ಲಿರಲು, ಬಿ.ಜೆ.ಪಿ. ತನ್ನ ನಿಲುವು ಸ್ಪಷ್ಟ ಪಡಿಸಿದೆ. ಈ ಮೂಲಕ ಕಾಂಗ್ರೆಸ್ ಸರ್ಕಾರದ ವಿರುದ್ಧ, ರಚನಾತ್ಮಕ ಹೋರಾಟ ರೂಪಿಸುವಂತೆ, ಪಕ್ಷದ ಹೈಕಮಾಂಡ್ ಕೂಡ, ರಾಜ್ಯದ ಬಿಜೆಪಿ ನಾಯಕರಿಗೆ ಸೂಚಿಸಿದೆ ಎಂದು, ಕೇಂದ್ರ ಆಹಾರ ಮತ್ತು ನಾಗರಿಕ ಪೂರೈಕೆ ಖಾತೆ ಸಚಿವ ಪ್ರಲ್ಹಾದ ಜೋಶಿ ಸ್ಪಷ್ಟ ಪಡಿಸಿದ್ದಾರೆ. ಹುಬ್ಬಳ್ಳಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಜ್ಯದ ಕಾಂಗ್ರೆಸ್ ಸರ್ಕಾರವನ್ನು ಅತಂತ್ರಗೊಳಿಸುವುದಿಲ್ಲ; ಆಪರೇಷನ್ ಕಮಲ ಸಹ ನಡೆಸಲು ಮುಂದಾಗುವುದಿಲ್ಲ, ಕಾಂಗ್ರೆಸ್ ನಾಯಕರು ತಮ್ಮ ತಪ್ಪುಗಳನ್ನು ಮರೆಮಾಚಲು, ಗೊಂದಲ ಸೃಷ್ಟಿಸುತ್ತಿದ್ದಾರೆ ಎಂದು, ಸಚಿವ ಜೋಶಿ ಆರೋಪಿಸಿದರು.

<><><>

ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವ್ಯಾಪ್ತಿಯ, ಎಲ್ಲ ಅಕಾದೆಮಿಗಳು ಮತ್ತು ಪ್ರಾಧಿಕಾರಗಳು ಪ್ರಕಟಿಸುವ ಪುಸ್ತಕಗಳನ್ನು, ವಿಶೇಷ ಸಂದರ್ಭಗಳಲ್ಲಿ, ಶೇಕಡ 50ರಷ್ಟು ರಿಯಾಯಿತಿ ದರದಲ್ಲಿ, ಓದುಗರಿಗೆ ಒದಗಿಸಬೇಕು ಎಂದು, ಮುಖ್ಯಮಂತ್ರಿ ಸಿದ್ದರಾಮಯ್ಯ, ಅಧಿಕಾರಿಗಳಿಗೆ ಸೂಚಿಸಿದ್ದಾರೆ. ಬೆಂಗಳೂರಿನ ರವೀಂದ್ರ ಕಲಾಕ್ಷೇತ್ರದಲ್ಲಿ ಆಯೋಜಿಸಿದ್ದ, ಕನಕದಾಸರ ಜಯಂತಿ ಕಾರ್ಯಕ್ರಮ ಉದ್ಘಾಟಿಸಿ, ಪ್ರಶಸ್ತಿ

ಪ್ರದಾನ ಮಾಡಿ, ಅವರು ಮಾತನಾಡಿದರು. ಕನಕದಾಸರ ಕುರಿತು ವಿಭಿನ್ನ ಒಳನೋಟಗಳಿರುವ ಕೃತಿಗಳನ್ನು ರಚಿಸಿರುವ, ವ್ಯಾಸನಕೆರೆ ಪ್ರಭಂಜನಾಚಾರ್ಯ ಅವರಿಗೆ, 2024ನೇ ಸಾಲಿನ ಕನಕಶ್ರೀ ಪ್ರಶಸ್ತಿಯನ್ನು, ಗಣ್ಯರು ಪ್ರದಾನ ಮಾಡಿ, ಗೌರವಿಸಿದರು. ಯುವ ಪುರಸ್ಕಾರಗಳನ್ನು ಸಹ ಪ್ರದಾನ ಮಾಡಲಾಯಿತು.

<><><>

ಬೆಳಗಾವಿಯ ಸುವರ್ಣ ಸೌಧದಲ್ಲಿ, ಡಿಸೆಂಬರ್ 9 ರಿಂದ 20ರ ವರೆಗೆ, ಚಳಿಗಾಲದ ಅಧಿವೇಶನ ನಡೆಯಲಿದೆ ಎಂದು, ವಿಧಾನಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಹೇಳಿದರು. ಧಾರವಾಡದಲ್ಲಿ ಅವರು ಸುದ್ದಿಗಾರರೊಂದಿಗೆ ಮಾತನಾಡಿದರು. ಈ ಬಾರಿ ಅಧಿವೇಶನದಲ್ಲಿ ಅನೇಕ ಮಸೂದೆಗಳು ಮಂಡನೆಯಾಗಲಿವೆ. ಅನೇಕ ವಿಷಯಗಳ ಬಗ್ಗೆ ಚರ್ಚೆಗಳಿದ್ದು, ಉತ್ತರಕರ್ನಾಟಕದ ಅಭಿವೃದ್ಧಿ ಬಗ್ಗೆ, ಈ ಭಾಗದ ಶಾಸಕರು ಕಾಳಜಿ ವಹಿಸಿ, ಅಧಿವೇಶನದಲ್ಲಿ ಸಕ್ರಿಯವಾಗಿ ಭಾಗವಹಿಸಬೇಕು ಎಂದರು. ಅಧಿವೇಶನಕ್ಕೂ ಮೊದಲು ಡಿಸೆಂಬರ್ 2 ರಂದು, ವಿಪಕ್ಷದ ನಾಯಕರ ಸಭೆ ನಡೆಸಿ, ಸಸೂತ್ರವಾಗಿ ಅಧಿವೇಶನ ನಡೆಯುವಂತೆ, ಯೋಜಿಸಲಾಗುವುದು ಎಂದರು.

<><><>

ವ್ಯಕ್ತಿಯೋರ್ವನ ಸಂಪೂರ್ಣ ಆರೋಗ್ಯ, ಕೌಶಲ, ಸಾಮರ್ಥ್ಯ ಮತ್ತು ಸಾಧನೆಗೆ ಮಾನಸಿಕ ಆರೋಗ್ಯವೇ ಬಹುಮುಖ್ಯ ಎಂದು, ಮನೋಆರೋಗ್ಯ ತಜ್ಞ, ಪದ್ಮಶ್ರೀ ಡಾಕ್ಟರ್ ಸಿ.ಆರ್. ಚಂದ್ರಶೇಖರ ಹೇಳಿದ್ದಾರೆ. ಬೆಂಗಳೂರು ಗ್ರಾಮಾಂತರ ಜಿಲ್ಲೆ, ದೊಡ್ಡಬಳ್ಳಾಪುರ ತಾಲೂಕಿನ, ತೂಬಗೆರೆ ಹೋಬಳಿಯ, ದೊಡ್ಡರಾಯಪ್ಪನಹಳ್ಳಿಯಲ್ಲಿ, 'ಗ್ರಾಮೀಣ ಆರೋಗ್ಯ ಮತ್ತು ಪರಿಸರ ಅಧ್ಯಯನ ಕೇಂದ್ರ'ವನ್ನು ಉದ್ಘಾಟಿಸಿ, ಅವರು ಮಾತನಾಡಿದರು.

<><><>

ಉಡುಪಿ ಪರ್ಯಾಯ ಪುತ್ತಿಗೆ ಮಠದ ವತಿಯಿಂದ, ವಿಶ್ವ ಗೀತಾ ಪರ್ಯಾಯ ಅಂಗವಾಗಿ, ನಾಳೆಯಿಂದ ಡಿಸೆಂಬರ್ 29ರ ವರೆಗೆ, ಶ್ರೀ ಕೃಷ್ಣ ಮಠದಲ್ಲಿ ಗೀತೋತ್ಸವ ನಡೆಯಲಿದೆ ಎಂದು, ಪರ್ಯಾಯ ಪುತ್ತಿಗೆ ಮಠಾಧೀಶ ಶ್ರೀ ಸುಗುಣೇಂದ್ರ ತೀರ್ಥ ಶ್ರೀಪಾದರು ತಿಳಿಸಿದ್ದಾರೆ. ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಶ್ರೀ ಕೃಷ್ಣ ಜನ್ಮಾಷ್ಟಮಿಯನ್ನು ಕೃಷ್ಣ ಮಾಸೋತ್ಸವದಲ್ಲಿ ಆಚರಿಸಿದಂತೆ, ಭಗವದ್ಗೀತೆ ಬಗ್ಗೆ ಜನಸಾಮಾನ್ಯರಿಗೆ ತಿಳಿಸುವ ಆಶಯದಿಂದ, ಈ ಕಾರ್ಯಕ್ರಮ ಏರ್ಪಡಿಸಲಾಗಿದೆ ಎಂದರು.

<><><>

ಬೆಳಗಾವಿ ಜಿಲ್ಲೆ ಯಮಕನಮರಡಿ ಸಮೀಪದ ಬೆನಕನಹೊಳಿ ಬಳಿ, ಘಟಪ್ರಭಾ ನದಿ ಹಿನ್ನೀರಿನ ಪ್ರದೇಶದಲ್ಲಿ, ಮೀನುಗಾರಿಕೆಗೆ ಹೋದ, ಇಬ್ಬರು ಮಕ್ಕಳು ಹಾಗೂ ಅವರ ತಂದೆಯ ಮೃತದೇಹ ಪತ್ತೆಯಾಗಿವೆ.

<><><>

ದಕ್ಷಿಣಕನ್ನಡ ಜಿಲ್ಲೆ, ಉಪ್ಪಿನಂಗಡಿ ಮತ್ತು ಮೂಡುಬಿದಿರೆಯಲ್ಲಿ, ಅಖಿಲ ಭಾರತ ಅಂತರ್ ವಿಶ್ವವಿದ್ಯಾಲಯ ಗುಡ್ಡಗಾಡು ಓಟದ ಸ್ಪರ್ಧೆ ಇಂದಿನಿಂದ ಎರಡು ದಿನಗಳ ಕಾಲ ನಡೆಯಲಿದೆ. ಉಪ್ಪಿನಂಗಡಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಆವರಣದಲ್ಲಿ, ಇಂದು ಸಂಜೆ ನಾಲ್ಕು ಗಂಟೆಗೆ ಪುರುಷ ಅಥ್ಲೀಟ್‌ಗಳ ಸ್ಪರ್ಧೆ ನಡೆಯಲಿದ್ದು, ಮೂಡುಬಿದಿರೆ ಆಳ್ವಾಸ್ ಕಾಲೇಜು ಆಯೋಜಿಸಲಿರುವ ಮಹಿಳೆಯರ ಓಟದ ಸ್ಪರ್ಧೆ ನಾಳೆ, ಬೆಳಗ್ಗೆ 7 ಗಂಟೆಯಿಂದ ನಡೆಯಲಿದೆ.

<><><>

ಉತ್ತರಕನ್ನಡ ಜಿಲ್ಲೆ, ಹೊನ್ನಾವರದ ಸಮರ್ಥ ಜಗದೀಶ್ ರಾವ್ ಅವರು, ಕಿರ್ಗಿಸ್ಥಾನದ ಬಿಷ್ಕೆಕ್ ನಲ್ಲಿ, ಭಾನುವಾರ ಮುಕ್ತಾಯಗೊಂಡ, ವಿಶೇಷಚೇತನರ ಎರಡನೇ ಚೆಸ್ ಚಾಂಪಿಯನ್ ಶಿಪ್ ಪಂದ್ಯಾವಳಿಯಲ್ಲಿ, ಬೆಳ್ಳಿ ಪದಕ ಗೆದ್ದಿದ್ದಾರೆ. ಭಾರತ ಕ್ರೀಡಾ ಪ್ರಾಧಿಕಾರದ ಆರ್ಥಿಕ ನೆರವಿನಿಂದ, ಅಖಿಲ ಭಾರತ ಚೆಸ್ ಫೆಡರೇಶನ್ ಮತ್ತು ಪಿ.ಸಿ.ಐ. ಸಹಯೋಗದಲ್ಲಿ, ಎಂಟು ವಿಶೇಷಚೇತನ ಆಟಗಾರರು, ಈ ಚಾಂಪಿಯನ್ ಶಿಪ್‌ನಲ್ಲಿ ಭಾಗವಹಿಸಿದ್ದರು.

<><><>

ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.

ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ 1 ಗಂಟೆ 10 ನಿಮಿಷಕ್ಕೆ..

<><><>